# ಮೈಸೂರು ವಿಶ್ವವಿದ್ಯಾನಿಲಯ

(ಸ್ಥಾಪನೆ-1916)
(4ನೇ ಆವೃತ್ತಿಯ ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್-2024: ವಿಶ್ವವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು-570 005

ಸಂಖ್ಯೆ: ಪ.ವಿ/8.6/07(2)/ಅಧಿಸೂಚನೆ/2015-16 **ದಿನಾಂಕ: 09-04-2025**

## ಅಧಿಸೂಚನೆ

ವಿಷಯ: ಮೇ/ಜೂನ್-2025ರಲ್ಲಿ ಜರುಗಲಿರುವ **2 (SEP ಪದ್ಧತಿಯ Freshers), 4 ಮತ್ತು 6ನೇ** ಸೆಮಿಸ್ಟರ್‌ನ **(NEP ಪದ್ಧತಿಯ Freshers & Repeaters)** ಹಾಗೂ 2ನೇ ಸೆಮಿಸ್ಟರ್‌ನ **(NEP ಪದ್ಧತಿಯ Repeaters)** ಸ್ನಾತಕ ಪದವಿ (UG) ಪರೀಕ್ಷೆಯ ಬಗ್ಗೆ.

ಉಲ್ಲೇಖ: 1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ7(ಎ)/59/2024-25, ದಿನಾಂಕ:15-01-2025 (ಶೈಕ್ಷಣಿಕ ವೇಳಾಪಟ್ಟಿಗೆ ಸಂಬಂಧಿಸಿರುವುದು).

2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/264/2023-24, ದಿನಾಂಕ:06-05-2024 (ಪರೀಕ್ಷಾ ಶುಲ್ಕಗಳಿಗೆ ಸಂಬಂಧಿಸಿರುವುದು).

******

ಮೇ/ಜೂನ್-2025ರ ಮಾಹೆಯಲ್ಲಿ ನಡೆಯಲಿರುವ **2 (SEP ಪದ್ಧತಿಯ Freshers), 4 ಮತ್ತು 6ನೇ** ಸೆಮಿಸ್ಟರ್‌ನ **(NEP ಪದ್ಧತಿಯ Freshers & Repeaters)** ಹಾಗೂ 2ನೇ ಸೆಮಿಸ್ಟರ್‌ನ **(NEP ಪದ್ಧತಿಯ Repeaters)** * ಸ್ನಾತಕ ಪದವಿ ಪರೀಕ್ಷೆಗಳಾದ ಬಿ.ಎ., ಬಿ.ಎಸ್ಸಿ., ಬಿ.ಕಾಂ., ಬಿ.ಬಿ.ಎ., ಬಿ.ಸಿ.ಎ. ಬಿ.ಎಸ್.ಡಬ್ಲ್ಯೂ., ಬಿ.ಬಿ.ಎ.(T&T)/ಬಿ.ಬಿ.ಎ.(T&H), ಬಿ.ಪಿ.ಎ., ಮತ್ತು ಬಿ.ವಿ.ಎ [Visual Arts (CAVA)] ಪರೀಕ್ಷೆಗಳು **ದಿನಾಂಕ: 20-05-2025**ರಿಂದ ಪ್ರಾರಂಭವಾಗಲಿದೆ, ಈ ಸಂಬಂಧದ ವಿವರಗಳು ಕೆಳಕಂಡಂತಿರುತ್ತದೆ.

| ಕ್ರ.ಸಂ | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು UUCMS ಅಡಿಯಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ತಮ್ಮ ಕೋರ್ಸಿನ AEC/Languages, SEC ಮತ್ತು Open Elective ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | **23.04.2025** |
| 2 | ರೂ.100/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು **(with 1st penalty)** | **24.04.2025** |
| 3 | ರೂ.200/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು **(with 2nd & last penalty)** | **25.04.2025** |
| 4 | ಕಾಲೇಜಿನವರು ಪ್ರವೇಶ ಪತ್ರಗಳನ್ನು ಮುದ್ರಿಸಿಕೊಳ್ಳುವ ದಿನಾಂಕ | **25.04.2025** ಮತ್ತು **26.04.2025** |
| 5 | ಪ್ರಾಯೋಗಿಕ ಪರೀಕ್ಷೆಗಳನ್ನು ಪ್ರಾರಂಭಿಸಿ ಹಾಗೂ ಪೂರ್ಣಗೊಳಿಸುವ ದಿನಾಂಕ | **28.04.2025** ರಿಂದ **17.05.2025** |
| 6 | ಕಾಲೇಜಿನವರು ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೋಢೀಕರಿಸಿ ಈ ಕಛೇರಿಗೆ ಸಲ್ಲಿಸುವ ದಿನಾಂಕ | **28.04.2025** |

| | | |
|---|---|---|
| 7 | $C_1$ & $C_2$ (continuous assessment) ಅಂಕಗಳನ್ನು ಆನ್‌ಲೈನ್ ಮೂಲಕ ನಮೂದಿಸಲು ಕೊನೆಯ ದಿನಾಂಕ | 10.05.2025 |
| 8 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 20.05.2025 |

<u>ಸೂಚನೆಗಳು:</u>

1. ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ:17.05.2025ರೊಳಗೆ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಯನ್ನು ಬಾಹ್ಯ ಪರೀಕ್ಷಕರು (External Examiners) ನಡೆಸುವುದು.
2. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ <u>Online ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.</u>
3. ವಿದ್ಯಾಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ (subject selection)ಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ, ಪರೀಕ್ಷಾ ಅರ್ಜಿಗಳಲ್ಲಿ ನ್ಯೂನ್ಯತೆಗಳಿದ್ದರೆ, ಪ್ರವೇಶ ಪತ್ರಗಳ ಮುದ್ರಣಕ್ಕೆ ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು, ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಮತ್ತೊಮ್ಮೆ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದಲ್ಲಿ ಕಾಲೇಜಿನ ಆಡಳಿತ ವರ್ಗ ಹಾಗೂ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತರೆ.
4. 2021–22 ನೇ ಶೈಕ್ಷಣಿಕ ಸಾಲಿನಲ್ಲಿ ದಾಖಲಾದ (NEP ಪದ್ಧತಿಯ) ರಿಪೀಟರ್ಸ್ ವಿದ್ಯಾರ್ಥಿಗಳಿಗೂ ಈ ಕೆಳಗಿನ ಪರೀಕ್ಷಾ ಶುಲ್ಕಗಳು ಅನ್ವಯಿಸುವುದು.

<u>ಪರೀಕ್ಷಾ ಶುಲ್ಕಗಳ ದರಗಳು</u>

ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.426/– ಗಳನ್ನು ಪಾವತಿಸುವುದು.

| | | |
|---|---|---|
| **1.** | **<u>B.A./B.P.A./ B.V.A/B.Com :</u>** | |
| | a) II & IV Semester whole Examination<br>Per paper with Practical<br>Per paper without Practical | **Rs.1,172/-**<br>**Rs. 759/-**<br>**Rs. 585/-** |
| | b) VI Semester whole Examination<br>Per paper with Practical<br>Per paper without Practical | **Rs.1,411/-**<br>**Rs. 759/-**<br>**Rs. 585/-** |
| | c) VIII Semester whole Examination<br>Per paper with Practical<br>Per paper without Practical | **Rs.1,730/-**<br>**Rs.1,025/-**<br>**Rs. 585/-** |
| **2.** | **<u>B.Sc./B.C.A./B.Sc. in Family & Community Science :</u>** | |
| | a) II & IV Semester whole Examination<br>Per paper with Practical<br>Per paper without Practical | **Rs.1,318/-**<br>**Rs. 759/-**<br>**Rs. 585/-** |
| | b) VI Semester whole Examination<br>Per paper with Practical<br>Per paper without Practical | **Rs.1,464/-**<br>**Rs. 759/-**<br>**Rs. 585/-** |
| **3.** | **<u>B.F.A./B.B.A/BSW :</u>** | |
| | a) II, IV & VI Semester Whole Examination (per semester)<br>Per paper with Practical<br>Per paper without Practical | **Rs.1,730/-**<br>**Rs.1025/-**<br>**Rs.585/-** |

| | | |
|---|---|---|
| 4. | **B.B.A (T&H)/B.B.A (T&T) :**<br>a) II, IV & VI Semester Whole Examination (per semester)<br>Per paper with Practical<br>Per paper without Practical | **Rs.3,328/-**<br>**Rs.1025/-**<br>**Rs.585/-** |

***Subject to a maximum of whole examination Fee fixed per semester.***

**Degree Certificate Fee Details:**

**General : 1931/-**
**SC/ST and Cat-I : 879/-**

## ವಿಶೇಷ ಸೂಚನೆಗಳು:

1. **ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.426/–ನ್ನು ಸಹ ಪಾವತಿಸತಕ್ಕದ್ದು.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಘ/1/9/2013–14, ದಿನಾಂಕ: 25.09.2013ರ ಪ್ರಕಾರ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಭೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಪಾವತಿಸಿಕೊಳ್ಳಬಾರದೆಂದು ಸರ್ಕಾರದ ಆದೇಶದನ್ವಯ, ಇದರಂತೆ ಕ್ರಮ ತೆಗೆದುಕೊಳ್ಳುವುದು.
4. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು UUCMS Portal ಮುಖಾಂತರ Student Login ನಲ್ಲಿ ರೂ.10/–ನ್ನು ಪಾವತಿಸುವುದು ಹಾಗೂ ಪರೀಕ್ಷಾ ಅರ್ಜಿಯನ್ನು ಕಡ್ಡಾಯವಾಗಿ Submit ಮಾಡುವುದು. ಅರ್ಜಿಯನ್ನು Submit ಮಾಡದೇ ಹೋದಲ್ಲಿ ಈ ಅಧಿಸೂಚನೆಯಲ್ಲಿ ತಿಳಿಸಿರುವ ದಂಡಶುಲ್ಕವು ಇವರಿಗೂ ಅನ್ವಯವಾಗುತ್ತದೆ.

## ವಿದ್ಯಾರ್ಥಿಗಳಿಗೆ ಸೂಚನೆಗಳು:

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.
4. ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.

## ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.

2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು. ಈ ದಿನಾಂಕ ಮೀರಿಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ.
3. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.
4. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

9/4/25

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ಮಾನಸಗಂಗೋತ್ರಿ, ಮೈಸೂರು ಮತ್ತು ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ಧಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
5. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು.
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ ಪ್ರತಿ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ತಮ್ಮ ಬಾನುಲಿ ಹಾಗೂ ಟಿ.ವಿ ವಾಹಿನಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಭಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮಾನಸಗಂಗೋತ್ರಿ, ಮೈಸೂರು 570006.
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ನಿರ್ದೇಶಕರು, ICD, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
15. ಅಧೀಕ್ಷಕರು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
17. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕ ಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
18. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
19. ಕಛೇರಿ ಪ್ರತಿ.